579 (895) ಶ್ರೀ ಶ್ರೀರಾಮರೆಡ್ಡಿ ಜಿ.ವಿ.(ಬಾಗೇಪಲ್ಲಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಗಿನ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ಬಾಗೇಪಲ್ಲಿ ಪಟ್ಟಣದಲ್ಲಿ ಸರ್ಕಾರಿ ಆಸ್ಪತ್ರೆಯಲ್ಲಿ ಶಸ್ತ್ರ ಚಿಕಿತ್ಸಾ ತಜ್ಞರ ಕೊರತೆ, ಅಂಬುಲೆನ್ಸ್ ದುರಸ್ಥಿ, ಜನರೇಟರ್ ದುರಸ್ಥಿ ಮತ್ತು ಸಿಬ್ಬಂದಿಯ ಕೊರತೆಯಿಂದಾಗಿ ಇಲ್ಲಿಗೆ ಬರುವ ರೋಗಿಗಳಿಗೆ ತೊಂದರೆಯಾಗುತ್ತಿರುವುದು ಸರ್ಕಾರವ ಗಮನಕ್ಕೆ ಬಂದಿದೆಯೇ:

ಆ) ಈ ಆಸ್ಪತ್ರೆಯ ಮೂಲಭೂತ ಸೌಲಭ್ಯಗಳನ್ನು ಒದಗಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ?

ಶ್ರೀ ಆರ್. ಅಶೋಕ್(ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಸಾರ್ವಜನಿಕ ಆಸ್ಪತ್ರೆ ಬಾಗೇಪಲ್ಲಿಯಲ್ಲಿ 6 ತಜ್ಞರ ವೈದ್ಯರ ಹುದ್ದೆಗಳು ಈ ಕೆಳಕಂಡಂತೆ ಮಂಜೂರಾಗಿದ್ದು ಸದರಿ ಹುದ್ದೆಯ ಎದುರು ಹುದ್ದೆಯಲ್ಲಿ ಗುತ್ತಿಗೆ ಆಧಾರದ ಮೇಲೆ ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳಾಗಿ ನೇಮಕಾತಿ ಹೊಂದಿ ಕಾರ್ಯನಿರ್ವಹಿಸುತ್ತಿದ್ದಾರೆ.

1) ಶಸ್ತ್ರ ಚಿಕಿತ್ಸಕರು
2) ಪ್ರಸೂತಿ ತಜ್ಞರು
3) ಅರವಳಿಕೆ ತಜ್ಞರು
4) ಮಕ್ಕಳ ತಜ್ಞರು
5) ಮೂಳೆ ತಜ್ಞರು
6) ಸಾಮಾನ್ಯ ತಜ್ಞ ವೈದ್ಯರು

ಅಂಬುಲೆನ್ಸ್ ವಾಹನವು ದುರಸ್ಥಿಯಾಗಿದ್ದು, ದುರಸ್ಥಿಯ ನಂತರ ಈಗ ಚಾಲನೆಯಲ್ಲಿರುತ್ತದೆ.

ಜನರೇಟರ್ ಇರಿಸಲು ಕೊಠಡಿ ಇದ್ದು, ಜನರೇಟರ್ ಇನ್ನು ಸರಬರಾಜು ಆಗಿರುವುದಿಲ್ಲ. ಆದರೆ 2006–07ನೇ ಸಾಲಿನ ಕ್ರಿಯಾ ಯೋಜನೆಯಡಿಯಲ್ಲಿ ಹಣ ಒದಗಿಸಿದ್ದು, ನಿಯಮಾನುಸಾರ ಖರೀದಿಸಲು ಕ್ರಮ ಜರುಗಿಸಲಾಗಿದೆ.

ಸಿಬ್ಬಂದಿಗಳ ಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆ. ಆದರೆ ರೋಗಿಗಳಿಗೆ ತೊಂದರೆಯಾಗದಂತೆ ಅಗತ್ಯವಿರುವ ಸಿಬ್ಬಂದಿಯಿಂದ ಚಿಕಿತ್ಸೆ ನೀಡಲಾಗುತ್ತಿದೆ. ಇನ್ನುಳಿದ ಖಾಲಿ ಇರುವ ಹುದ್ದೆಗಳನ್ನು ಶೀಘ್ರದಲ್ಲಿಯೇ ಬಡ್ತಿ ಮತ್ತು ವಿಶೇಷ ನೇರ ನೇಮಕಾತಿ ಮೂಲಕ ತುಂಬಲಾಗುವುದು.

ಆ) ಹೌದು.

580 (896) ಶ್ರೀ ಶ್ರೀರಾಮರೆಡ್ಡಿ ಜಿ.ವಿ. (ಬಾಗೇಪಲ್ಲಿ) : ಮಾನ್ಯ ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) 2005–06ನೇ ಸಾಲಿನಲ್ಲಿ ಎಸ್.ಸಿ. ಎಸ್.ಟಿ. ಅಭಿವೃದ್ಧಿ ನಿಗಮದ ವತಿಯಿಂದ ಗಂಗಾ ಕಲ್ಯಾಣ ಯೋಜನೆಯಡಿ ಕೊರೆದಿರುವ ಕೊಳವೆ ಬಾವಿಗಳಿಗೆ ಇದುವರೆವಿಗೂ ಪಂಪು ಮೋಟಾರ್ ನೀಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ:

ಆ) ಹಾಗಿದ್ದಲ್ಲಿ, ಸರ್ಕಾರ ಈ ಬಗ್ಗೆ ಏನು ಕ್ರಮ ಕೈಗೊಂಡಿದೆ?

ಶ್ರೀ ಬಾಲಚಂದ್ರ ಲ. ಜಾರಕಿಹೊಳಿ(ಸಮಾಜ ಕಲ್ಯಾಣ ಸಚಿವರು) :

ಅ) –ಹೌದು–

ಆ) ಕೊಳವೆ ಬಾವಿಯ ಘಟಕದ ವೆಚ್ಚ ರೂ. 65,000/– ಸಹಾಯಧನ ಮಿತಿಗಿಂತ ಹೆಚ್ಚಾಗುವ, ಪ್ರಕರಣಗಳಿಗೆ ವಿದ್ಯುದ್ದೀಕರಣಕ್ಕಾಗಿ ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಬೇಕಾದ ಠೇವಣಿ (CYMD/MSD) ಹಣವನ್ನು ಪಾವತಿಸಲು ಫಲಾನುಭವಿಗಳು ಅಶಕ್ತರಾಗಿರುವ ಕಾರಣ ಮತ್ತು ಹೆಚ್ಚುವರಿ ಮೊತ್ತಕ್ಕೆ ರಾಷ್ಟ್ರೀಯ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ ಹಣಕಾಸು ಅಭಿವೃದ್ಧಿ ನಿಗಮ, ಹೊಸದೆಹಲಿ ಇವರಿಂದ ಪಡೆದ ಅವಧಿಸಾಲಕ್ಕೆ ಪ್ರತಿ ಫಲಾನುಭವಿಗೆ ರೂ. 15,000/– ದಂತೆ ಅವಧಿಸಾಲ ಮಂಜೂರು ಮಾಡಲು ಅಗತ್ಯ ದಾಖಲಾತಿಗಳನ್ನು ನಿಗಮಕ್ಕೆ ನೀಡಿ ಸಾಲ ಮಂಜೂರು ಮಾಡಿಸಲು ವಿಳಂಬ ಮಾಡುತ್ತಿರುವ ಪ್ರಯುಕ್ತ ನಿಗದಿತ ಸಮಯದಲ್ಲಿ ಪಂಪ್‌ಸೆಟ್‌ಗಳನ್ನು ಕೊಳವೆಬಾವಿಗಳಿಗೆ ಅಳವಡಿಸಲು ಸಾಧ್ಯವಾಗುತ್ತಿಲ್ಲ.

ವಿದ್ಯುತ್ ಸರಬರಾಜು ಕಂಪನಿಗಳಿಗೆ ಪಾವತಿಸಬೇಕಾದ ಠೇವಣಿ (CYMD/MSD) ಹಣವನ್ನು ಸರ್ಕಾರದಿಂದಲೇ ಭರಿಸಿ ವಿದ್ಯುದ್ದೀಕರಣಕ್ಕೆ ಬಾಕಿ ಇರುವ ಎಲ್ಲಾ ಕೊಳವೆಬಾವಿಗಳಿಗೆ ವಿದ್ಯುದ್ದೀಕರಣಗೊಳಿಸುವ ಪ್ರಸ್ತಾವನೆ ಪರಿಶೀಲನೆಯಲ್ಲಿದೆ. ಪಂಪ್‌ಸೆಟ್‌ಗಳನ್ನು ಅಳವಡಿಸಲು ಈಗಾಗಲೇ ಪಂಪ್‌ಸೆಟ್ ಸರಬರಾಜು ಕಂಪನಿಗಳಿಗೆ ಕಾರ್ಯದೇಶ ನೀಡಲಾಗಿರುತ್ತದೆ ಹಾಗೂ ಅವಧಿಸಾಲಕ್ಕೆ ಅಗತ್ಯ ದಾಖಲಾತಿಗಳನ್ನು ನಿಗಮಕ್ಕೆ ಸಲ್ಲಿಸಿ ಸಾಲ ಮಂಜೂರು ಮಾಡಿಸಿಕೊಳ್ಳುವಂತೆ ಫಲಾನುಭವಿಗಳ ಮನವೊಲಿಸಿ ಪಂಪ್‌ಸೆಟ್‌ಗಳನ್ನು ಅಳವಡಿಸಲಾಗುತ್ತಿದೆ. ಅದರಂತೆ ಕಾರ್ಯ ಪ್ರಗತಿಯಲ್ಲಿದೆ.

581 (905) ಶ್ರೀ ವಾಟಾಳ್ ನಾಗರಾಜ್ (ಚಾಮರಾಜನಗರ)) : ಮಾನ್ಯ ಪಶುಸಂಗೋಪನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ಕಾರ್ಯನಿರ್ವಹಿಸುತ್ತಿರುವ ಪಶುಆಸ್ಪತ್ರೆಗಳ ಸಂಖ್ಯೆ ಎಷ್ಟು;

ಆ) ಈ ಆಸ್ಪತ್ರೆಗಳಲ್ಲಿ ವೈದ್ಯರಕೊರತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಸದರಿ ಆಸ್ಪತ್ರೆಗಳಲ್ಲಿ ಸರಿಯಾದ ಔಷಧಿಗಳನ್ನು ಸರಬರಾಜು ಮಾಡಲಾಗುತ್ತಿದೆಯೆ;

ಈ) ವೈದ್ಯ ಕೊರತೆಯನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು?

ಶ್ರೀ ರೇವು ನಾಯಕ ಬೆಳಮಗಿ (ಪಶುಸಂಗೋಪನೆ ಸಚಿವರು) :

ಅ) ರಾಜ್ಯದಲ್ಲಿ ಹಿಂದುಳಿದ ಗಡಿ ಪ್ರದೇಶ ಚಾಮರಾಜನಗರ ಜಿಲ್ಲೆಯು ಸೇರಿದಂತೆ ವಿವಿಧ ದರ್ಜೆಯ ಒಟ್ಟು 3876 ಪಶುಚಿಕಿತ್ಸಾಲಯಗಳು ಹಾಗೂ ಪಶು ಆಸ್ಪತ್ರೆಗಳು ಇರುತ್ತವೆ. ಚಾಮರಾಜನಗರ ಜಿಲ್ಲೆಯಲ್ಲಿ 76 ವಿವಿಧ ದರ್ಜೆಯ ಪಶು ಚಿಕಿತ್ಸಾಲಯಗಳು ಮತ್ತು ಪಶು ಆಸ್ಪತ್ರೆಗಳು ಕಾರ್ಯನಿರ್ವಹಿಸುತ್ತಿವೆ.